**ಕರ್ನಾಟಕ ಸರ್ಕಾರ**
**(ಕೃಷಿ ಇಲಾಖೆ)**

ಸಂ:ಉಕೃನಿ/ಸರೋಶಾ/ಕೃಷಿ ಅಭಿಯಾನ/2015-16

ಕೃಷಿ ಆಯುಕ್ತಾಲಯ
ಶೇಷಾದ್ರಿ ರಸ್ತೆ, ಬೆಂಗಳೂರು-01
ದಿನಾಂಕ: 27-04-2015

**ಸುತ್ತೋಲೆ** **ಅತಿ ತುರ್ತು**

ವಿಷಯ: 2015-16ನೇ ಸಾಲಿನಲ್ಲಿ " ಕೃಷಿ ಅಭಿಯಾನ " ಕಾರ್ಯಕ್ರಮವನ್ನು ಆಯೋಜಿಸಲಾಗುವ ವೇಳಾ ಪಟ್ಟಿಯನ್ನು ಸಲ್ಲಿಸುವ ಬಗ್ಗೆ

ಉಲ್ಲೇಖ: ದಿನಾಂಕ: 06-04-2015 ರಂದು ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು ಮತ್ತು ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ನಡೆದ ಕೃಷಿ ಅಭಿಯಾನ ಕಾರ್ಯಕ್ರಮ ಕುರಿತ ಸಭಾ ನಡವಳಿ

***

**2015-16ನೇ ಸಾಲಿನಲ್ಲಿ "ಕೃಷಿ ಅಭಿಯಾನ"** ಕಾರ್ಯಕ್ರಮವನ್ನು ಕೃಷಿ ಮತ್ತು ಎಲ್ಲಾ ಅಭಿವೃದ್ಧಿ ಇಲಾಖೆಗಳ ಸಮನ್ವಯದೊಂದಿಗೆ ರೈತರಿಗೆ ಸಮಗ್ರ ಕೃಷಿ ಮಾಹಿತಿಯನ್ನು ನೀಡುವ ವಿಶಿಷ್ಠ ಕಾರ್ಯಕ್ರಮವನ್ನು **"ಇಲಾಖೆಗಳ ನಡಿಗೆ ರೈತರ ಬಾಗಿಲಿಗೆ "** ಎಂಬ ಶೀರ್ಷಿಕೆಯಡಿ ಹಮ್ಮಿಕೊಳ್ಳಲಾಗುತ್ತದೆ.

- ಕೃಷಿ ಅಭಿಯಾನ ಕಾರ್ಯಕ್ರಮವನ್ನು ಹೋಬಳಿ ಮಟ್ಟದಲ್ಲಿ ಮೂರು ದಿನಗಳ ಕಾಲ ಹಮ್ಮಿಕೊಳ್ಳುವುದು. ಅಂದರೆ ಪ್ರತಿ ಹೋಬಳಿಯಲ್ಲಿ ಎಲ್ಲಾ ಗ್ರಾಮಪಂಚಾಯತಿಗಳು ಒಳಗೊಂಡಂತೆ ಎರಡು ದಿನಗಳ ಕಾಲ ತೀವ್ರ ಪ್ರಚಾರ ಕಾರ್ಯದ ಜೊತೆಗೆ ವಿಜ್ಞಾನಿಗಳು ಹಾಗೂ ಅಧಿಕಾರಿಗಳನ್ನೊಳಗೊಂಡ ತಂಡಗಳು ರೈತರೊಂದಿಗೆ ಸಂವಾದ ಕಾರ್ಯಕ್ರಮ ಏರ್ಪಡಿಸಿದ ನಂತರ ಮೂರನೇ ದಿನ ಹೋಬಳಿ ಕೇಂದ್ರ ಸ್ಥಾನದಲ್ಲಿ ಅಭಿಯಾನ ಸಮಾರಂಭವನ್ನು ಏರ್ಪಡಿಸುವುದು.
- **ಕೃಷಿ ಅಭಿಯಾನ ಕಾರ್ಯಕ್ರಮವನ್ನು ಹೋಬಳಿ ಮಟ್ಟದಲ್ಲಿ ಮಾತ್ರ ಆಯೋಜಿಸುವುದು. ಸದರಿ ಕಾರ್ಯಕ್ರಮವನ್ನು ಮೇ 1 ರಿಂದ 30 ಜೂನ್ 2015 ರೊಳಗಾಗಿ ಏರ್ಪಡಿಸುವುದು.**
- ಪ್ರತಿ ತಾಲ್ಲೂಕಿನಲ್ಲಿ ಒಂದು ಹೋಬಳಿಯಲ್ಲಿ ಕಾರ್ಯಕ್ರಮವನ್ನು ಹಮ್ಮಿಕೊಂಡ ನಂತರ ಮತ್ತೊಂದು ಹೋಬಳಿಯಲ್ಲಿ ಹಮ್ಮಿಕೊಳ್ಳುವುದು. ಈ ರೀತಿ ತಾಲ್ಲೂಕಿನ ಎಲ್ಲಾ ಹೋಬಳಿಗಳಲ್ಲಿ ಕಾರ್ಯಕ್ರಮವನ್ನು ಆಚರಿಸಿ ಯಶಸ್ವಿಯಾಗಿ ಅನುಷ್ಠಾನಗೊಳಿಸತಕ್ಕದ್ದು.
- ಮುಂಬರುವ ಗ್ರಾಮ ಪಂಚಾಯಿತಿ ಚುನಾವಣೆಗಳು/ ಚುನಾವಣಾ ನೀತಿ ಸಂಹಿತೆಯನ್ನು ಗಮನದಲ್ಲಿಟ್ಟುಕೊಂಡು, ಕೃಷಿ ಅಭಿಯಾನ ಕಾರ್ಯಕ್ರಮದ ಆಚರಣೆಯನ್ನು ಪ್ರತಿ ಹೋಬಳಿಗೆ ಪ್ರತ್ಯೇಕ ದಿನಾಂಕವನ್ನು ನಿಗದಿಪಡಿಸಿಕೊಂಡು ಅನುಷ್ಠಾನ ಮಾಡುವುದು.

--2

- ತಮ್ಮ ಜಿಲ್ಲೆಯಲ್ಲಿರುವ ಎಲ್ಲಾ ತಾಲ್ಲೂಕುಗಳಲ್ಲಿ, ಹೋಬಳಿವಾರು ಪ್ರತ್ಯೇಕ ದಿನಾಂಕವನ್ನು ನಿಗದಿಪಡಿಸಿಕೊಂಡು, ಕಾರ್ಯಕ್ರಮವನ್ನು ಆಯೋಜಿಸಲಿರುವ ವಿವರಗಳೊಂದಿಗೆ ವೇಳಾ ಪಟ್ಟಿಯನ್ನು ತುರ್ತಾಗಿ ಸರ್ಕಾರಕ್ಕೆ ಸಲ್ಲಿಸಬೇಕಾಗಿರುತ್ತದೆ. ಆದ್ದರಿಂದ ಸಂಬಂಧಪಟ್ಟ ಜಿಲ್ಲಾಧಿಕಾರಿಗಳ ಹಾಗೂ ಮುಖ್ಯಕಾರ್ಯನಿರ್ವಹಣಾ ಅಧಿಕಾರಿಗಳೊಂದಿಗೆ ಚರ್ಚಿಸಿ ವೇಳಾ ಪಟ್ಟಿಯನ್ನು ತಯಾರಿಸುವುದು.
- ಆದ್ದರಿಂದ ತಮ್ಮ ಜಿಲ್ಲೆಯ ತಾಲ್ಲೂಕುವಾರು, ಹೋಬಳಿ ಮಟ್ಟದ ಕೃಷಿ ಅಭಿಯಾನ ಕಾರ್ಯಕ್ರಮದ ವೇಳಾ ಪಟ್ಟಿಯನ್ನು, ಗ್ರಾಮೀಣ ಅಭಿವೃದ್ಧಿ & ಪಂಚಾಯತ್ ರಾಜ್ ಇಲಾಖಾ ಸಿಬ್ಬಂದಿಯೊಂದಿಗೆ ಸಮಾಲೋಚಿಸಿ, ಗ್ರಾಮ ಸಭೆಗಳು ಇರುವ ದಿನಾಂಕಗಳನ್ನು ಗಮನದಲ್ಲಿಟ್ಟುಕೊಂಡು, ತಯಾರಿಸಿ **ದಿನಾಂಕ:30-04-2015 ರೊಳಗಾಗಿ, ಕೃಷಿ ಆಯುಕ್ತಾಲಯದ ಸಸ್ಯ ರೋಗ ಶಾಸ್ತ್ರ ವಿಭಾಗಕ್ಕೆ ಕಳುಹಿಸಲು ಸೂಚಿಸಿದೆ.**
- ಕೃಷಿ ಅಭಿಯಾನ ಕಾರ್ಯಕ್ರಮದ ವಿವರವಾದ ಮಾರ್ಗಸೂಚಿಯನ್ನು ಇದರೊಂದಿಗೆ ಲಗತ್ತಿಸಿದೆ.

22.4.15.
ಕೃಷಿ ಆಯುಕ್ತರು

**ಇವರಿಗೆ,**

ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರುಗಳು

**ಪ್ರತಿಯನ್ನು ಮಾಹಿತಿಗಾಗಿ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಹಕಾರ ಇಲಾಖೆ
ಸರ್ಕಾರದ ಕಾರ್ಯದರ್ಶಿಗಳು, ಪಶುಸಂಗೋಪನೆ & ಮೀನುಗಾರಿಕೆ
ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು
ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
ಸಂಯೋಜಕರು, ರಾಜ್ಯ ಮಟ್ಟದ ಬ್ಯಾಂಕುಗಳ ಸಮಿತಿ (SLBC)
ಎಲ್ಲಾ ಜಿಲ್ಲಾ ಉಪ ನಿರ್ದೇಶಕರುಗಳು (ತೋಟಗಾರಿಕೆ)/(ಪಶುಸಂಗೋಪನೆ & ಮೀನುಗಾರಿಕೆ)/(ರೇಷ್ಮೆ)